# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಮಂಗಳಪ್ಪ ನಾಯಕ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹನುಮಸಾಗರ ಗ್ರಾಮ ಪಂಚಾಯತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ವಿರುದ್ಧ ಕ್ರಮ ಕೈಗೊಳ್ಳುವ ಕುರಿತು – ಆದೇಶ.

**ಓದಲಾಗಿದೆ:** 1. ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅ.ಸ.ಪ.ಸಂ:ಕಂಪ್ಲೇಂಟ್/ಉಪಲೋಕ್/ಬಿಡಿ–4128/2014/ಡಿಆರ್‌ಇ–1, ದಿನಾಂಕ: 17–11–2017.

2. ಮಾನ್ಯ ಉಪಲೋಕಾಯಕ್ತರವರ ವರದಿ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ ಬಿಡಿ–4128/2014/ಡಿಆರ್‌ಇ–1, ದಿನಾಂಕ: 09/12–10–2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ದಿನಾಂಕ:17–11–2017 ರವರ ಪತ್ರದೊಂದಿಗೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 12(3) ರನ್ವಯ ಮಾನ್ಯ ಉಪಲೋಕಾಯುಕ್ತರವರ ಸಲ್ಲಿಸಿರುವ ವರದಿಯಲ್ಲಿ ಶ್ರೀ ರಾಜಾನಾಯ್ಕ ಬಿನ್ ಮಂಜಾನಾಯ್ಕ, ಹನುಮಸಾಗರ ಮೇಲಿನ ತಾಂಡ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ಇವರು (1) ಮಂಗಳಪ್ಪ ನಾಯಕ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹನುಮಸಾಗರ ಗ್ರಾಮ ಪಂಚಾಯತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ (2) ಅಧ್ಯಕ್ಷರು, ಹನುಮಸಾಗರ ಗ್ರಾಮ ಪಂಚಾಯತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ (3) ಉಪಾಧ್ಯಕ್ಷರು ಮತ್ತು (4) ಕಾರ್ಯದರ್ಶಿ, ಹನುಮಸಾಗರ ಗ್ರಾಮ ಪಂಚಾಯತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ (ಇನ್ನು ಮುಂದೆ "ಎದುರುದಾರರು" ಎಂದು ಕರೆಯಲ್ಪಡುತ್ತಾರೆ) ಇವರ ವಿರುದ್ಧ ದೂರು ಸಲ್ಲಿಸಿದ ಮೇರೆಗೆ ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 9ರಡಿಯಲ್ಲಿ ದತ್ತವಾದ ಅಧಿಕಾರ ಚಲಾಯಿಸಿ, ವಿಚಾರಣೆಗೆ ತೆಗೆದುಕೊಂಡು ತನಿಖೆ ಮಾಡಿದೆ.

**ದೂರಿನ ಸಂಕ್ಷಿಪ್ತ ವಿವರಣೆ:**

ಈ ಪ್ರಕರಣದಲ್ಲಿ ಹನುಮಸಾಗರ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಮನೆ ಗ್ರಾಂಟ್ ಫಲಾನುಭವಿಗಳ ಆಯ್ಕೆಯಲ್ಲಿ ಅವ್ಯವಹಾರವಾಗಿರುತ್ತದೆ ಮತ್ತು ಹನುಮಸಾಗರ ಮೇಲಿನ ತಾಂಡಾದ ಅಂಗನವಾಡಿಯ ಜಾಗದಲ್ಲಿ ಅಕ್ರಮವಾಗಿ ಕಾಂಪೌಂಡ್ ನಿರ್ಮಾಣ ಮಾಡಿರುತ್ತಾರೆ. ಹನುಮಸಾಗರ ಗ್ರಾಮ ಪಂಚಾಯತಿಯಲ್ಲಿ ಅವ್ಯವಹಾರಗಳು ನಡೆಯುತ್ತಿವೆ. ಈ ಬಗ್ಗೆ ದೂರು ಸಲ್ಲಿಸಿದರೂ ಸಹ ಎದುರುದಾರರು ಯಾವುದೇ ಕ್ರಮವನ್ನು ಕೈಗೊಂಡಿಲ್ಲವೆಂದು ಆಪಾದಿಸಿ ಈ ದೂರನ್ನು ಸಲ್ಲಿಸಿರುತ್ತಾರೆ.

ದೂರುದಾರರ ದೂರಿನ ಮೇಲೆ ಆಕ್ಷೇಪಣೆಯನ್ನು ಸಲ್ಲಿಸುವಂತೆ ಎದುರುದಾರರಿಗೆ ಆದೇಶಿಸಲಾಗಿತ್ತು. 1 ಮತ್ತು 4ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ಗ್ರಾಮ ಪಂಚಾಯತಿಗಳಿಗೆ ಮಂಜೂರು ಮಾಡುವ ವಸತಿ ಯೋಜನೆಯಡಿಯಲ್ಲಿ ಫಲಾನುಭವಿಗಳನ್ನು ನೇರವಾಗಿ ಗ್ರಾಮ ಪಂಚಾಯತ್ ಸದಸ್ಯರಾಗಲೀ ಮತ್ತು ಅಧಿಕಾರಿಗಳಾಗಲೀ ಆಯ್ಕೆ ಮಾಡುವ ಅಧಿಕಾರ ಹೊಂದಿರುವುದಿಲ್ಲ. ಬದಲಾಗಿ ಸಾರ್ವಜನಿಕರ ಸಮ್ಮುಖದಲ್ಲಿ ಗ್ರಾಮ ಪಂಚಾಯತಿಯ ಎಲ್ಲಾ ಸದಸ್ಯರು ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳೊಬ್ಬರ ಸಮ್ಮುಖದಲ್ಲಿ ಗ್ರಾಮ ಸಭೆಯನ್ನು ನಡೆಸಿ ಗ್ರಾಮಸ್ಥರ ಎದುರಿನಲ್ಲೇ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುತ್ತದೆ. ಗ್ರಾಮ ಸಭೆಯನ್ನು ಆಯೋಜಿಸುವ ಮುನ್ನ ಸಾಕಷ್ಟು ಪ್ರಚಾರ ನಡೆಸಿ, ಆಕಾಂಕ್ಷಿಗಳಿಂದ ಅರ್ಜಿಗಳನ್ನು ಮುಂಚಿತವಾಗಿ ಪಡೆದು ಅವುಗಳನ್ನು ಪರಿಶೀಲಿಸಿ, ಅರ್ಹ ಫಲಾನುಭವಿಗಳ ಹೆಸರನ್ನು ಮಾತ್ರ ಗ್ರಾಮ ಸಭೆಯಲ್ಲಿ ಆಯ್ಕೆಗೆ ಪರಿಗಣಿಸಲಾಗುತ್ತದೆ. ಗ್ರಾಮ ಸಭೆಯಲ್ಲಿ ಹೆಸರನ್ನು ಪ್ರಕಟಿಸಿ ಗ್ರಾಮಸ್ಥರಿಂದಲೇ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುತ್ತದೆ. ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಕ್ರಿಯಾ ಯೋಜನೆ ತಯಾರಿಸಲಾಗಿದ್ದು, ಹನುಮಸಾಗರ ಮೇಲಿನ ತಾಂಡಾದಲ್ಲಿರುವ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ಕಾಂಪೌಂಡ್ ನಿರ್ಮಾಣ ಕಾಮಗಾರಿಯನ್ನು ಸೇರ್ಪಡೆ ಮಾಡಲಾಗಿತ್ತು. ಆದರೆ ಶಾಲಾ ಆವರಣದಲ್ಲಿ ಕಾಂಪೌಂಡ್ ನಿರ್ಮಾಣ ಮಾಡುವುದಕ್ಕಿಂತ ಅದೇ ಗ್ರಾಮದ ಅಂಗನವಾಡಿ ಕೇಂದ್ರದ ಆವರಣದಲ್ಲಿ ಕಾಂಪೌಂಡ್ ನಿರ್ಮಾಣ ಮಾಡುವುದು ಅಗತ್ಯವಾಗಿತ್ತು. ಆದ್ದರಿಂದ, ಸಾಮಾನ್ಯ ಸಭೆಯಲ್ಲಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ಬದಲಾಗಿ ಅಂಗನವಾಡಿ ಕೇಂದ್ರದ ಆವರಣದಲ್ಲಿ ಕಾಂಪೌಂಡ್ ನಿರ್ಮಾಣ ಮಾಡಲು ತೀರ್ಮಾನಿಸಲಾಯಿತು. ಅದರಂತೆ ಯೋಜನೆಯ ಮಾರ್ಗಸೂಚಿಯನುಸಾರ ಕಾಮಗಾರಿ ಆದೇಶ

ಪಡೆದು ಕೂಲಿ ಕಾರ್ಮಿಕರಿಂದಲೇ ಕಾಂಪೌಂಡ್ ನಿರ್ಮಾಣ ಕಾಮಗಾರಿಯನ್ನು ನಿರ್ವಹಿಸಲಾಗಿರುತ್ತದೆ. ಮುಂದುವರೆದು ತನ್ನ ಆಕ್ಷೇಪಣೆಯಲ್ಲಿ ದೂರುದಾರರಿಗೆ ಯಾವ ಫಲಾನುಭವಿ ಅನರ್ಹರು ಎಂಬ ಮಾಹಿತಿ ಇಲ್ಲದೇ ಒಂದು ನಿರ್ದಿಷ್ಟ ಗ್ರಾಮದ ಇಡೀ ಆಯ್ಕೆ ಪಟ್ಟಿಯನ್ನೇ ದೂರಿನೊಂದಿಗೆ ಲಗತ್ತಿಸಿರುತ್ತಾರೆ. ದೂರುದಾರರು ಗ್ರಾಮ ಪಂಚಾಯತಿಯಲ್ಲಿ ಮಾಹಿತಿಯನ್ನು ಪಡೆದಿದ್ದು, ಅವರು ನೀಡಿದ ಮಾಹಿತಿ ಮತ್ತು ದಾಖಲೆಗಳನ್ನು ಕಾಮಗಾರಿ ಹಾಗೂ ವಸತಿ ಫಲಾನುಭವಿಗಳ ಕಡತಗಳನ್ನು ಪರಿಶೀಲಿಸಿರುತ್ತಾರೆ. ಆದ್ದರಿಂದ, ಯಾವುದೇ ಅಕ್ರಮ ಕಂಡುಬಂದಿರುವುದಿಲ್ಲವೆಂದು ದೂರುದಾರರಿಗೆ ಮನವರಿಕೆಯಾಗಿರುತ್ತದೆಯೆಂದು ಹೇಳಿರುತ್ತಾರೆ. 2ನೇ ಎದುರುದಾರರಿಗೆ ನೋಟೀಸು ಜಾರಿಯಾದರೂ ಸಹ ಯಾವುದೇ ಆಕ್ಷೇಪಣೆಯನ್ನು ಸಲ್ಲಿಸಿರುವುದಿಲ್ಲ. 3ನೇ ಎದುರುದಾರರು ಕಳುಹಿಸಿರುವ ಪತ್ರ ದಿನಾಂಕ:06-04-2016 ರಂದು ಬಂದಿದ್ದು, ಅದರಲ್ಲಿ ದೂರಿನ ವಿಷಯವಾಗಿ ಸ್ಪಷ್ಟೀಕರಣ ವರದಿಯನ್ನು ಕೊರಿಯರ್ ಮೂಲಕ ಸಲ್ಲಿಸಲಾಗಿದೆಯೆಂದು ತಿಳಿಸಿದ್ದು, ಆದರೆ ಕೊರಿಯರ್‌ನಲ್ಲಿ ಯಾವುದೇ ಆಕ್ಷೇಪಣೆ ಸ್ವೀಕೃತವಾಗಿರುವುದು ಕಂಡುಬಂದಿರುವುದಿಲ್ಲ. ಎದುರುದಾರರ ಆಕ್ಷೇಪಣೆಯ ಮೇಲೆ ಪ್ರತ್ಯುತ್ತರವನ್ನು ಸಲ್ಲಿಸುವಂತೆ ದೂರುದಾರರಿಗೆ ಕಳುಹಿಸಿದ ನೋಟೀಸು ಜಾರಿಯಾದರೂ ಸಹ ಅವರು ಯಾವುದೇ ಪ್ರತ್ಯುತ್ತರವನ್ನು ಸಲ್ಲಿಸಿರುವುದಿಲ್ಲ.

ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ವಸತಿ ಯೋಜನೆಯಡಿ ಫಲಾನುಭವಿಗಳನ್ನು ಗ್ರಾಮ ಸಭೆಯಲ್ಲಿ ಆಯ್ಕೆ ಮಾಡಲಾಗುತ್ತದೆಯೆಂದು ಹೇಳಿರುತ್ತಾರೆ. ಆದರೆ, ಗ್ರಾಮ ಸಭೆಯಲ್ಲಿ ಫಲಾನುಭವಿಗಳ ಆಯ್ಕೆಯ ಬಗ್ಗೆ ನಡವಳಿಯನ್ನಾಗಲೀ ಅಥವಾ ಗ್ರಾಮ ಸಭೆಯಲ್ಲಿ ಆಯ್ಕೆಯಾದ ಫಲಾನುಭವಿಗಳ ಪಟ್ಟಿಯನ್ನು ಅನುಮೋದನೆಗಾಗಿ ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟಿರುವ ಬಗ್ಗೆ ಎದುರುದಾರರು ಯಾವುದೇ ದಾಖಲಾತಿಗಳನ್ನು ಹಾಜರುಪಡಿಸಿರುವುದಿಲ್ಲ. ಅಲ್ಲದೆ ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ಕಾಂಪೌಂಡ್ ನಿರ್ಮಾಣ ಮಾಡಲು ಕಾಮಗಾರಿ ಆದೇಶವಿದ್ದರೂ ಸಹ ಸದರಿ ಕಾಮಗಾರಿಯನ್ನು ಅಂಗನವಾಡಿ ಕಟ್ಟಡ ಆವರಣದಲ್ಲಿ ಮಾಡಲು ಯಾವುದೇ ಆಧೇಶವನ್ನು ಪಡೆದಿರುವುದು ಕಂಡುಬಂದಿರುವುದಿಲ್ಲ. ಸದರಿ ವಿಚಾರಗಳ ಬಗ್ಗೆ ದಾಖಲಾತಿಗಳನ್ನು ಪರಿಶೀಲಿಸುವುದು ಸೂಕ್ತವೆಂದು ಕಂಡುಬಂದ ಕಾರಣ, ದೂರುದಾರರ ದೂರಿನ ಬಗ್ಗೆ ತನಿಖೆ ನಡೆಸಿ ದಾಖಲಾತಿಗಳ ಸಮೇತ ವರದಿ ಸಲ್ಲಿಸುವಂತೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಹೊನ್ನಾಳಿ ಇವರಿಗೆ ಆದೇಶಿಸಲಾಗಿತ್ತು.

ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಹೊನ್ನಾಳಿ ಇವರ ಲೆಕ್ಕ ಪರಿಶೋಧನಾಧಿಕಾರಿ, ತಾಲ್ಲೂಕು ಪಂಚಾಯತ್, ಹೊನ್ನಾಳಿ ಮತ್ತು ತಾಲ್ಲೂಕು ನೋಡಲ್ ಅಧಿಕಾರಿ, ತಾಲ್ಲೂಕು ಪಂಚಾಯತ್, ಹೊನ್ನಾಳಿ ಇವರಿಂದ ವಿಚಾರಣೆ ನಡೆಸಿ ವರದಿಯನ್ನು ಸಲ್ಲಿಸಿದ್ದು, ಅವರು ಈ ಕೆಳಗಿನಂತೆ ವರದಿಯನ್ನು ನೀಡಿರುತ್ತಾರೆ.

> "2014-15ನೇ ಸಾಲಿನ ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ತಯಾರಿಸಿದ ಕ್ರಿಯಾ ಯೋಜನೆಯ ಕ್ರ.ಸಂ.20ರಲ್ಲಿ ಹನುಮಸಾಗರ ಮೇಲಿನ ತಾಂಡದ ಸರ್ಕಾರಿ ಪ್ರಾಥಮಿಕ ಶಾಲಾ ಕಾಂಪೌಂಡ್ ನಿರ್ಮಾಣ ಅಂದಾಜು ಮೊತ್ತ ರೂ.1,36,000/- ಗಳಿಗೆ ಮಂಜೂರಾಗಿರುತ್ತದೆ. ಅದರಂತೆ ಶ್ರೀಯುತ. ಜಿ.ಹೆಚ್.ವೆಂಕಟೇಶ್ ತಾಂತ್ರಿಕ ಸಹಾಯಕ ಇಂಜಿನಿಯರ್ ಅಂದಾಜು ಪಟ್ಟಿಯನ್ನು ತಯಾರಿಸಿರುತ್ತಾರೆ. ದಿನಾಂಕ:03-09-2013 ಗ್ರಾಮ ಪಂಚಾಯತಿ ಹನುಮಸಾಗರ ಇವರು ಅನುಮೋದನೆಗೊಂಡ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಕಾಮಗಾರಿ ಆದೇಶವನ್ನು ನೀಡುವಂತೆ ಕೋರಿಕೊಂಡಿರುತ್ತಾರೆ. ಅದರಂತೆ ಕಾರ್ಯನಿರ್ವಾಹಕ ಅಧಿಕಾರಿಗಳು ಆದೇಶ ಸಂ.09/2014-15, ದಿನಾಂಕ:06-09-2014 ಕಾಮಗಾರಿ ಕಾರ್ಯಾದೇಶದ ಪತ್ರವನ್ನು ಸಹ ನೀಡಿರುತ್ತಾರೆ. ಕಾಮಗಾರಿಯನ್ನು ಅನುಷ್ಠಾನಗೊಳಿಸಿ ಎನ್.ಎಂ.ಆರ್. 56154/-ರೂ.ಗಳನ್ನು ಮತ್ತು ಎಂ.ಬಿ. ಪುಟಸಂಖ್ಯೆ: 26 ರಿಂದ 30ರವರೆಗೆ ಸಾಮಾಗ್ರಿ ಬಿಲ್ಲು (ಫಿಡಬ್ಲ್ಯೂಜಿ-32) ರೂ.74,432/- ರೂ.ಗಳನ್ನು ಒಟ್ಟು ರೂ.1,30,586/-ಗಳನ್ನು ವೆಚ್ಚ ಭರಿಸಲಾಗಿದೆ" ಎಂದು ಹೇಳಿರುತ್ತಾರೆ.

ವರದಿಯನ್ನು ಪರಿಶೀಲಿಸಿದಾಗ, ಕಾಮಗಾರಿಯನ್ನು ಅನುಷ್ಠಾನಗೊಳಿಸದೆ ಹಣವನ್ನು ಡ್ರಾ ಮಾಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ. ಆದ್ದರಿಂದ, ಸದರಿ ಸಮಯದಲ್ಲಿ ಅಳತೆ ಪುಸ್ತಕವನ್ನು ನಿರ್ವಹಿಸಿರುವ ಸಹಾಯಕ ಅಭಿಯಂತರರನ್ನು ಸಹ ಈ ಪ್ರಕರಣದಲ್ಲಿ ಪಕ್ಷಗಾರರನ್ನಾಗಿ ಮಾಡಬಹುದಾಗಿರುತ್ತದೆ. ಅದಲ್ಲದೆ ಅವ್ಯವಹಾರ ನಡೆದ ಸಮಯದಲ್ಲಿ ಕರ್ತವ್ಯದಲ್ಲಿದ್ದ ಅಧಿಕಾರಿಗಳ ವಿವರಗಳನ್ನು ಕೂಡ ಸಂಗ್ರಹಿಸಬೇಕಾಗಿರುತ್ತದೆ.

ವಿಚಾರಣಾಧಿಕಾರಿಯ ವರದಿಯಲ್ಲಿ ಯಾವ ಸಾಲಿನಲ್ಲಿ ಉದ್ಯೋಗ ಖಾತರಿ ಕಾಂಪೌಂಡ್ ನಿರ್ಮಾಣ, ಮನೆ ಗ್ರಾಂಟ್, ರಸ್ತೆ ಮತ್ತು ಜಮೀನು ಒಡ್ಡುಗಳಲ್ಲಿ ಅವ್ಯವಹಾರವಾಗಿದೆಯೆಂದು ಸ್ಪಷ್ಟಪಡಿಸಿಲ್ಲ. ವಸತಿ ಯೋಜನೆಯಡಿ

ಹಾಜರಾಗಿ ಯಾವುದೇ ದಾಖಲಾತಿಗಳನ್ನು ಸಲ್ಲಿಸಿರುವುದಿಲ್ಲ, ಅಲ್ಲದೆ ಶ್ರೀ ಮಂಗಳೆಪ್ಪ ನಾಯಕ, ಪಿಡಿಓ, ಹನುಮಸಾಗರ ಗ್ರಾಮಪಂಚಾಯಿತಿ, ಹೊನ್ನಾಳಿ ತಾಲ್ಲೂಕು ಇವರ ಅಧಿಕಾರಾವಧಿಯಲ್ಲಿ ಬಸವ ವಸತಿ ಯೋಜನೆಯಲ್ಲಿ ಫಲಾನುಭವಿಗಳ ಆಯ್ಕೆ ವಿಚಾರದಲ್ಲಿ ಅವ್ಯವಹಾರ ನಡೆದಿರುವುದು ಕಂಡುಬಂದಿರುವುದಿಲ್ಲ.

ಆದ್ದರಿಂದ ದೂರಿನಲ್ಲಿ ಅಪಾದಿಸಿರುವ ಶ್ರೀ ಮಂಗಳೆಪ್ಪ ನಾಯಕ ಹಿಂದಿನ ಪಿಡಿಓ, ಹನುಮಸಾಗರ ಗ್ರಾಮಪಂಚಾಯಿತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ ರವರು ತಮ್ಮ ಅಧಿಕಾರಾವಧಿಯಲ್ಲಿ ಹನುಮಸಾಗರ ಮೇಲಿನ ತಾಂಡ ಗ್ರಾಮದಲ್ಲಿ ಅಂಗನವಾಡಿ ಕೇಂದ್ರದ ಬಳಿ ಕಾಂಪೌಂಡ್ ಕಾಮಗಾರಿಯನ್ನು ನಿಯಮಾನುಸಾರ ನಿರ್ವಹಿಸದೆ ತಮ್ಮ ಕರ್ತವ್ಯದಲ್ಲಿ ನಿರ್ಲಕ್ಷತನ ತೋರಿರುವುದು ಕಂಡುಬಂದಿರುತ್ತದೆ" ಎಂದು ಅಭಿಪಾಯ ನೀಡಿರುತ್ತಾರೆ.

ತನಿಖಾಧಿಕಾರಿಯ ವರದಿಯನ್ನು ಪರಿಶೀಲಿಸಿದಾಗ, 1ನೇ ಎದುರುದಾರರು ತನ್ನ ಅಧಿಕಾರಾವಧಿಯಲ್ಲಿ ಹನುಮಸಾಗರ ಮೇಲಿನ ತಾಂಡ ಗ್ರಾಮದಲ್ಲಿ ಅಂಗನವಾಡಿ ಕೇಂದ್ರದ ಬಳಿ ಕಾಂಪೌಂಡ್ ಕಾಮಗಾರಿಯನ್ನು ನಿಯಮಾನುಸಾರ ನಿರ್ವಹಿಸದೆ, ತಮ್ಮ ಕರ್ತವ್ಯದಲ್ಲಿ ನಿರ್ಲಕ್ಷತನ ತೋರಿರುತ್ತಾರೆಂದು ವರದಿ ನೀಡಿದ್ದು, ವರದಿಯಲ್ಲಿ ಕಾಮಗಾರಿ ಸ್ಥಳಾಂತರದ ಬಗ್ಗೆ ಮೇಲಾಧಿಕಾರಿಗಳಿಂದ ಕಾಮಗಾರಿ ಆದೇಶವನ್ನು ಕೂಡ ಪಡೆದುಕೊಂಡಿರುವುದಿಲ್ಲವೆಂದು ಹೇಳಿರುವುದು ಕಂಡುಬರುತ್ತದೆ. ಕಾಮಗಾರಿ ಸ್ಥಳವನ್ನು ಬದಲಾವಣೆ ಮಾಡಲು ಪಂಚಾಯತ್ ಸಭೆಯಲ್ಲಿ ತೀರ್ಮಾನ ತೆಗೆದುಕೊಂಡರೂ ಸಹ ಮೇಲಾಧಿಕಾರಿಗಳಿಂದ ಅನುಮತಿಯನ್ನು ಪಡೆದು ಮುಂದುವರೆಯುವುದು ಪಂಚಾಯತ್ ಅಭಿವೃದ್ಧಿ ಅಧಿಕಾರಿಯ ಕರ್ತವ್ಯವಾಗಿರುತ್ತದೆ. ಸದರಿ ಕರ್ತವ್ಯವನ್ನು ನಿರ್ವಹಿಸುವಲ್ಲಿ 1ನೇ ಎದುರುದಾರರು ವಿಫಲಗೊಂಡಿರುತ್ತಾರೆಂದು ಮೇಲ್ನೋಟಕ್ಕೆ ಕಂಡುಬರುತ್ತಿದ್ದು, ಆದ್ದರಿಂದ 1ನೇ ಎದುರುದಾರರು ಶಿಸ್ತು ಕ್ರಮಕ್ಕೆ ಬಾದ್ಯರಾಗಿರುತ್ತಾರೆ.

ಆದ್ದರಿಂದ, 1ನೇ ಎದುರುದಾರರ ಆಕ್ಷೇಪಣೆಯು ಅವರ ಮೇಲಿನ ಆಪಾದನೆಯನ್ನು ಅಲ್ಲಗಳೆಯಲು ಸೂಕ್ತ ಅಥವಾ ಸಮಾಧಾನಕರವಾಗಿರುವುದಿಲ್ಲ ಮತ್ತು ದೂರುದಾರರ ದೂರನ್ನು ಹಾಗೂ ತನಿಖಾಧಿಕಾರಿಯ ವರದಿಯನ್ನು ಅಲ್ಲಗಳೆಯಲು ಯಾವುದೇ ಸಮಂಜಸ/ಸಮರ್ಪಕ ಉತ್ತರವನ್ನು ತಮ್ಮ ಆಕ್ಷೇಪಣೆಯಲ್ಲಿ ನೀಡಿಲ್ಲವೆಂಬ ಅಭಿಪ್ರಾಯಕ್ಕೆ ಬಂದಿದೆ.

1ನೇ ಎದುರುದಾರರು ಸಾರ್ವಜನಿಕ/ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೆ, ಕರ್ತವ್ಯಲೋಪವೆಸಗಿ, ಸಾರ್ವಜನಿಕ/ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮ 1966ರ ನಿಯಮ 3(1)(ii) ಮತ್ತು (iii) ರನ್ವಯ ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡುಬಂದಿದ್ದರಿಂದ, 1ನೇ ಎದುರುದಾರರ ವಿರುದ್ಧ ಶಿಸ್ತು ನಡವಳಿಕೆ ಹೂಡಲು ಮತ್ತು ಹಾಗೆಯೇ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರ ಅಡಿಯಲ್ಲಿ, 1ನೇ ಎದುರುದಾರರ ವಿರುದ್ಧ ವಿಚಾರಣೆ ನಡೆಸಲು ಈ ಪ್ರಾಧಿಕಾರಕ್ಕೆ ಒಪ್ಪಿಸುವಂತೆ, ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3) ರನ್ವಯ ಪ್ರದತ್ತವಾದ ಅಧಿಕಾರದಡಿ, ಶಿಸ್ತು ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ.

ಶ್ರೀ ಮಂಗಳಪ್ಪ ನಾಯಕ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹನುಮಸಾಗರ ಗ್ರಾಮ ಪಂಚಾಯತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/845/ಗ್ರಾಪಂಕಾ/2017 ಬೆಂಗಳೂರು, ದಿನಾಂಕ: 08-12-2017.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಮಂಗಳಪ್ಪ ನಾಯಕ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹನುಮಸಾಗರ ಗ್ರಾಮ ಪಂಚಾಯತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ವಿರುದ್ಧದ ಆಪಾದನೆಗಳ ಬಗ್ಗೆ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ 14(ಎ) ಅಡಿಯಲ್ಲಿ ಈ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸಿ ಆದೇಶಿಸಲಾಗಿದೆ.

ಫಲಾನುಭವಿಗಳನ್ನು ನೇರವಾಗಿ ಗ್ರಾಮ ಸಭೆಯಲ್ಲಿ ಗ್ರಾಮಸ್ಥರೆ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡುವುದರಿಂದ ಇದರಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಪಾತ್ರ ಇರುವುದಿಲ್ಲವೆಂದು ಹೇಳಿರುತ್ತಾರೆ. ಆದರೆ ಫಲಾನುಭವಿಗಳ ಆಯ್ಕೆಯಾದ ನಂತರ ಅವರ ಅರ್ಹತೆಯ ಬಗ್ಗೆ ಪರಿಶೀಲನೆ ನಡೆಸಿ ಮಂಜೂರಾತಿಗೆ ಶಿಫಾರಸ್ಸು ಮಾಡಿರುವ ಅಧಿಕಾರಿ ಯಾರು ಎಂಬ ಬಗ್ಗೆ ಪರಿಶೀಲನೆ ನಡೆಸುವುದು ಸೂಕ್ತವೆಂದು ಕಂಡುಬಂದ ಕಾರಣ, ಮೇಲಿನ ಅಂಶಗಳ ಬಗ್ಗೆ ವಿಚಾರಣೆ ನಡೆಸಿ ವರದಿ ಸಲ್ಲಿಸುವಂತೆ ಪೊಲೀಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ದಾವಣಗೆರೆ ಇವರಿಗೆ ಆದೇಶಿಸಲಾಗಿತ್ತು. ಪೊಲೀಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ದಾವಣಗೆರೆ ಇವರು ವರದಿಯನ್ನು ಸಲ್ಲಿಸಿದ್ದು, ವರದಿಯಲ್ಲಿ ಈ ಕೆಳಗಿನಂತೆ ಅಭಿಪ್ರಾಯ ನೀಡಿರುತ್ತಾರೆ.

"ದಾವಣಗೆರೆ ಜಿಲ್ಲೆ, ಹೊನ್ನಾಳಿ ತಾಲ್ಲೂಕು, ಹನುಮಸಾಗರ ಗ್ರಾಮದ ವ್ಯಾಪ್ತಿಯಲ್ಲಿ ಬರುವ ಹನುಮಸಾಗರ ಮೇಲಿನ ತಾಂಡ ಗ್ರಾಮದಲ್ಲಿ 2014–15ನೇ ಸಾಲಿನಲ್ಲಿ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಕಾಂಪೌಂಡ್ ನಿರ್ಮಾಣಕ್ಕೆ ರೂ.1,36,000/–ಗಳಿಗೆ ನಿಯಮಾನುಸಾರ ಕಾಮಗಾರಿ ಆದೇಶ ಮಂಜೂರಾತಿಯನ್ನು ಅಂದಿನ ಪಿಡಿಓ ಶ್ರೀ ಮಂಗಳೇಶಪ್ಪ ನಾಯಕ ಇವರ ಅಧಿಕಾರ ಅವಧಿಯಲ್ಲಿ ನಿರ್ವಹಿಸಲು ಕಾರ್ಯಾದೇಶವಾಗಿ ನಂತರ ಕಾಮಗಾರಿಯನ್ನು ಮುಕ್ತಾಯಗೊಳಿಸಿರುವುದು ದಾಖಲಾತಿಗಳಿಂದ ಕಂಡುಬಂದಿದ್ದು, ಇವುಗಳಿಗೆ ಸಂಬಂಧಿಸಿದಂತೆ ಅಸಲು ದಾಖಲಾತಿಗಳು ಪಂಚಾಯತಿಯಲ್ಲಿ ಇರುವುದಿಲ್ಲವೆಂದು ಪ್ರಭಾರಿ ಪಿಡಿಓ ರವರು ತಮ್ಮ ಹೇಳಿಕೆಯಲ್ಲಿ ತಿಳಿಸಿ ಈ ಸಂಬಂಧ ಹಿಂದಿನ ಪಿಡಿಓ ಮಂಗಳೇಶಪ್ಪ ನಾಯಕ ಇವರ ಬಳಿ ಇದ್ದ ನಕಲು ದಾಖಲಾತಿಗಳನ್ನು ದೃಢೀಕರಿಸಿ ನೀಡಿರುವುದು ವಿಚಾರಣಾ ವರದಿಯಿಂದ ಕಂಡುಬರುತ್ತದೆ.

ಆದರೆ ವಾಸ್ತವಿಕವಾಗಿ ಹಾಗೂ ವಿಚಾರಣಾಧಿಕಾರಿಯವರು ಸಿಬ್ಬಂದಿಯೊಂದಿಗೆ ಮಾಡಿದ ಸ್ಥಳ ಪರಿಶೀಲನೆ/ಹೇಳಿಕೆಗಳಿಂದ ಹೊನ್ನಾಳಿ ತಾಲ್ಲೂಕು, ಹನುಮಸಾಗರ ಗ್ರಾಮದ ಸರ್ಕಾರಿ ಶಾಲೆಯ ಬಳಿ ಕಾಂಪೌಂಡ್ ನಿರ್ಮಾಣ ಮಾಡುವುದನ್ನು ಕೆಲವರು ವಿರೋಧಿಸಿದ್ದರಿಂದ, ಸದರಿ ಕಾಮಗಾರಿಯನ್ನು ಇದೇ ಗ್ರಾಮದ ಅಂಗನವಾಡಿ ಕೇಂದ್ರದ ಬಳಿ ಶ್ರೀ ಕೃಷ್ಣನಾಯ್ಕ ಇವರ ಮನೆಯ ಬಳಿ ನಿರ್ಮಾಣ ಮಾಡಿರುವುದು ಹಾಗೂ ಹಾಲಿ ಸದರಿ ಕಾಂಪೌಂಡ್ ಸಂಪೂರ್ಣ ಬಿದ್ದು, ಬುನಾದಿ ಇರುವುದು ಮಾತ್ರ ಕಂಡುಬಂದಿದ್ದು, ಸ್ಥಳವು ಕೃಷ್ಣನಾಯ್ಕ ಇವರಿಗೆ ಸೇರಿದ್ದರಿಂದ, ಇವರು ತಮಗೆ ಸಂಬಂಧಿಸಿದ ವಸ್ತುಗಳನ್ನು ಇಟ್ಟಿದ್ದು, ಸ್ಥಳದಲ್ಲಿ ದೂರಿನಲ್ಲಿ ಆಪಾದಿಸಿದಂತೆ ಯಾವುದೇ ತಿಪ್ಪೆಗುಂಡಿಗಳು ಇರುವುದು ವಿಚಾರಣಾಧಿಕಾರಿಯವರ ಸ್ಥಳ ಪರಿಶೀಲನೆ ಕಾಲದಲ್ಲಿ ಕಂಡುಬಂದಿರುವುದಿಲ್ಲ.

ವಿಚಾರಣಾಧಿಕಾರಿಗಳು ಹೊನ್ನಾಳಿ ತಾಲ್ಲೂಕು, ಹನುಮಸಾಗರ ಗ್ರಾಮ ಪಂಚಾಯತಿ ಕಚೇರಿಯಿಂದ ಹನುಮಸಾಗರ ಮೇಲಿನ ತಾಂಡ ಗ್ರಾಮದಲ್ಲಿರುವ ಅಂಗನವಾಡಿ ಕೇಂದ್ರಕ್ಕೆ ಸಂಬಂಧಿಸಿದಂತೆ ನಿವೇಶನ/ಕಟ್ಟಡದ ದಾಖಲಾತಿಯನ್ನು ಪಡೆದು ಪರಿಶೀಲಿಸಲಾಗಿದ್ದು, ಪಂಚಾಯತಿಯ ಬೇಡಿಕೆ ರಿಜಿಸ್ಟರ್‌ನಲ್ಲಿ ಅಂಗನವಾಡಿ ಕೇಂದ್ರ ಅಂತ ಮಾತ್ರ ನಮೂದಿಸಿದ್ದು, ನಿಖರವಾದ ಅಳತೆಯ ಬಗ್ಗೆ ನಮೂದು ಇಲ್ಲದೆ ಇರುವುದು ದಾಖಲಾತಿಗಳಿಂದ ಕಂಡುಬರುತ್ತದೆ.

ಶ್ರೀ ಮಂಗಳೆಪ್ಪ ನಾಯಕ ಪಿಡಿಓ, ರವರು ತಮ್ಮ ಅಧಿಕಾರಾವಧಿಯಲ್ಲಿ ಹೊನ್ನಾಳಿ ತಾಲ್ಲೂಕು, ಹನುಮಸಾಗರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಿಂದ ಅಂಗನವಾಡಿ ಕೇಂದ್ರಕ್ಕೆ ಕಾಂಪೌಡ್ ಕಾಮಗಾರಿಯನ್ನು ಸ್ಥಳಾಂತರಗೊಳಿಸಿ ನಿರ್ಮಿಸಿರುವ ಬಗ್ಗೆ ನಿಯಮಾನುಸಾರ ಕ್ರಮ ಕೈಗೊಳ್ಳದೆ, ಖಾಸಗಿ ಸ್ಥಳದಲ್ಲಿ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಕಾಂಪೌಂಡ್ ಕಾಮಗಾರಿಯನ್ನು ನಿರ್ವಹಿಸಿ, ತಮ್ಮ ಕರ್ತವ್ಯದಲ್ಲಿ ನಿರ್ಲಕ್ಷತ್ಯ ತೋರಿರುವುದು ವಿಚಾರಣಾಧಿಕಾರಿಯವರ ವಿಚಾರಣಾ ವರದಿ/ದಾಖಲಾತಿ/ ವಿಚಾರಣಾಧಿಕಾರಿಯವರ ಸ್ಥಳ ಪರಿಶೀಲನೆ/ ಹೇಳಿಕೆಗಳಿಂದ ಧೃಡಪಟ್ಟಿರುತ್ತದೆ.

ದಾವಣಗೆರೆ ಜಿಲ್ಲೆ ಹೊನ್ನಾಳಿ ತಾಲ್ಲೂಕು, ಹನುಮಸಾಗರ ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ಬಸವ ವಸತಿ ಯೋಜನೆಯಲ್ಲಿ ಮನೆ ಗ್ರ್ಯಾಂಟ್ ಫಲಾನುಭವಿಗಳ ಆಯ್ಕೆಯಲ್ಲಿ ಅವ್ಯವಹಾರ ನಡೆದಿರುವುದು ವಿಚಾರಣೆ ಕಾಲದಲ್ಲಿ ಪಡೆದುಕೊಂಡ ದಾಖಲೆ/ಹೇಳಿಕೆಗಳಿಂದ ಕಂಡುಬಂದಿರುವುದಿಲ್ಲ. ಅಲ್ಲದೆ ವಿಚಾರಣಾಧಿಕಾರಿಗಳು ಈ ಬಗ್ಗೆ ದೂರುದಾರರಾದ ಶ್ರೀ ರಾಜನಾಯ್ಕ, ಹನುಮಸಾಗರ ಗ್ರಾಮ ಇವರಿಗೆ ನೋಟೀಸ್ ನೀಡಿ. ಹಲವಾರು ಬಾರಿ ಕಚೇರಿಯಿಂದ ದೂರವಾಣಿ ಕರೆ ಮಾಡಿ ಮಾಹಿತಿ ತಿಳಿಸಿ ದೂರಿನಲ್ಲಿ ಅಪಾದನೆಗಳಿಗೆ ಸಂಬಂಧಿಸಿದಂತೆ ಸ್ಪಷ್ಟ ಮಾಹಿತಿ/ದಾಖಲೆ ಇದ್ದಲ್ಲಿ ಒದಗಿಸುವಂತೆ ಸೂಚಿಸಲಾಗಿದ್ದು, ಇಲ್ಲಿಯವರೆವಿಗೂ ಕಚೇರಿಗೆ ಹಾಜರಿಯಾಗಲೀ ಅಥವಾ ಗ್ರಾಮಕ್ಕೆ ಭೇಟಿ ನೀಡಿದ ಸಮಯದಲ್ಲಾಗಲೀ

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1) ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ ಸಂಖ್ಯೆ 1 ರಿಂದ 248 ರವರೆಗಿನ ಮೂಲದಾಖಲೆಗಳನ್ನು ಈ ಪತ್ರದೊಂದಿಗೆ ಹಿಂದಿರುಗಿಸಲಾಗಿದೆ)
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ದಾವಣಗೆರೆ, ದಾವಣಗೆರೆ ಜಿಲ್ಲೆ.
5) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಹೊನ್ನಾಳಿ, ದಾವಣಗೆರೆ ಜಿಲ್ಲೆ.
6) ಶ್ರೀ ಮಂಗಳಪ್ಪ ನಾಯಕ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹನುಮಸಾಗರ ಗ್ರಾಮ ಪಂಚಾಯತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ,
7) ಗಣಕ ಕೋಶ.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.